**ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಲಘಟಗಿ**

**ಸಿ ಸಿ ನಂ. 542/2018**

**ಚಾ.ಸಾ.** 15

**ಪ್ರಾ.ಸಾ.** 6

**ದಿನಾಂಕಃ 10.07.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೊಧಿಸಲಾಯಿತು.**

| | |
|---|---|
| ಸಾಕ್ಷಿಯ ಹೆಸರು | ಕುಬೇರ ರಾಠೋಡ |
| ತಂದೆಃ ಗಂಡನ ಹೆಸರು | ಗುರಪ್ಪ |
| ಉದ್ಯೋಗ | ನಿವೃತ್ತ ಎ ಎಸ್ ಐ |
| ವಯಸ್ಸು | 66 |
| ವಾಸಸ್ಥಳ | ಮುಂಡರಗಿ |

**ಪ್ರಾರಂಭ ಸಮಯಃ 01.13 ಪಿ. ಎಂ.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದ**

ನಾನು 2014 ರಿಂದ 2018 ರವರೆಗೆ ಕಲಘಟಗಿ ಪೊಲೀಸ್ ಠಾಣೆಯಲ್ಲಿ ಎ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿದ್ದೆ.

ದಿಃ22.03.2018 ರಂದು ನಾನು ಪೊಲೀಸ್ ಠಾಣೆಯ ಪ್ರಭರದಲ್ಲಿದ್ದಾಗ ಪ್ರಾಸಾ.1 ರವರು ನೀಡಿದ ದೂರನ್ನು ಸ್ವೀಕರಿಸಿ ಪ್ರಾ ವ ವರದಿಯನ್ನು ದಾಖಲು ಮಾಡಿಕೊಂಡು ಪ್ರತಿಯನ್ನು ನ್ಯಾಯಾಲಯಕ್ಕೆ ಮತ್ತು ನನ್ನ ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟಿರುತ್ತೇನೆ. ಸಾಕ್ಷಿಗೆ ಪ್ರವಾ ವರದಿಯನ್ನು ತೋರಿಸಲಾಗಿ ಅದನ್ನು ನಿಪಿ 9 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ9(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ನಿಪಿ 1 ನ್ನು ತೊಸೇರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 1 (ಬಿ) ಎಂದು ಗುರುತಿಸಲಾಯಿತು.

ದಿಃ22.03.2018 ರಂದು ರಾತ್ರಿ 9 ಗಂಟೆಯ ಸಮಯದಲ್ಲಿ ಚಾಸಾ 6 ಮತ್ತು 7 ರವರ ಸಮಕ್ಷಮ ನಿಪಿ5 ರಂತೆ ಶವ ಪಂಚನಾಮೆಯನ್ನು ಜರುಗಿಸಿರುತ್ತೇನೆ. ಸಾಕ್ಷಿಗೆ ನಿಪಿ 5 ನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 5(ಎ) ಎಂದು ಗುರುತಿಸಲಾಯಿತು. ನಂತರ ಮುಂದಿನ ತಾರೀಕಿಗಾಗಿ ಚಾಸಾ 16 ರವರಿಗೆ ಪ್ರಕರಣ ಕಡತವನ್ನು ಕೊಟ್ಟಿರುತ್ತೇನೆ.

**ಪಾಟೀ ಸವಾಲುಃ ಅಪಾದಿತನ ಪರ ಶ್ರೀ ಅರ್ ಆಯ್ ಕೆ ವಕೀಲರಿಂದ**

ಪ್ರಾಸಾ 1 ರವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಕರಣವನ್ನು ದಾಖಲು ಮಾಡಿದ್ದೇನೆಂದರೆ ಸರಿಯಲ್ಲ. ನಿಪಿ5 ನ್ನು ಪೊಲೀಸ್ ಠಾಣೆಯಲ್ಲಿ ಬರೆಯಲಾಗಿದೆ ಅಂದರೆ ಸರಿಯಲ್ಲ. ಅಪಾದಿತರಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

**ಓ ಹೇ ಕೆ ಸರಿ ಇದೆ,**

**ದಿವಾಣಿ ನ್ಯಾಯಾಧೀಶರು ಹಾಗೂ**

**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಲಘಟಗಿ.**